ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಯಳಂದೂರು ಮತ್ತು ಹುರಾ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

645(639) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಳಂದೂರು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯಕೀಯ, ಅರೆ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ: (ಹುದ್ದೆವಾರು ವಿವರ ನೀಡುವುದು)

(ಆ) ಕೊಳ್ಳೇಗಾಲ ತಾಲ್ಲೂಕು ಆಸ್ಪತ್ರೆಯಲ್ಲಿ ಎರಡು ಡಯಾಲಿಸಿಸ್ ಯಂತ್ರಗಳು ಕೆಟ್ಟು ಹೋಗಿದ್ದು, ಡಯಾಲಿಸಿಸ್‌ಗೆ ಬಳಸುವ ಔಷಧಿಗಳ ಕೊರತೆ ಇರುವುದರಿಂದ ಡಯಾಲಿಸಿಸ್‌ಗೆ ಒಳಪಡುವ ರೋಗಿಗಳಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಯಂತ್ರಗಳನ್ನು ದುರಸ್ತಿ ಮಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಹುರಾ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಕೀಯ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸುತ್ತಮುತ್ತಲ 30 ಹಳ್ಳಿಗಳಿಗೆ ಏಕೈಕ ಆಸ್ಪತ್ರೆಯಾಗಿರುವ ಈ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ?